ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 07/08/2020

ಅಧಿವೇಶನದ ಸ್ಥಳ ಮುಂದಿನ ವಾರ ಅಂತಿಮ

7-8-2020

ಬೆಂಗಳೂರು: ರಾಜ್ಯದಲ್ಲಿ ಕರೊನಾ ಸೋಂಕಿನ ಪ್ರಕರಣಗಳು ಹೆಚ್ಚುತ್ತಿವೆ. ಆದರೆ ಸಂವಿಧಾನಬದ್ಧ ಗಡುವಿನೊಳಗೆ ವಿಧಾನಸಭಾ ಅಧಿವೇಶನ ನಡೆಸಬೇಕಿದೆ. ಹೀಗಾಗಿ ಅಧಿವೇಶನದ ಸ್ಥಳವನ್ನು ಮುಂದಿನ ವಾರ ಅಂತಿಮಗೊಳಿಸಲಾಗುವುದು

ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು. ಸದನದಲ್ಲಿನ ವ್ಯವಸ್ಥೆಗಳನ್ನು ಗುರುವಾರ ಖುದ್ದು ಪರಿಶೀಲಿಸಿ, ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಲೋಕಸಭೆ, ರಾಜ್ಯಸಭೆ ಹಾಗೂ ಇತರ ರಾಜ್ಯಗಳಲ್ಲಿನ ವಿಧಾನಸಭೆ ಮತ್ತು ವಿಧಾನ ಪರಿಷತ್ ಸಮಾವೇಶಗೊಳ್ಳಲು ಹೇಗೆ ಸಿದ್ಧತೆ ನಡೆಸುತ್ತಿವೆ ಎಂಬುದರ ಬಗ್ಗೆಯೂ ಮಾಹಿತಿ ಸಂಗ್ರಹಿಸಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದರು. ರಾಜ್ಯ ವಿಧಾನಸಭಾ ಅಧಿವೇಶನವು ಮಾರ್ಚ್‌ನಲ್ಲಿ ನಡೆದಿದ್ದು, ಸಂವಿಧಾನಬದ್ಧವಾಗಿ 6 ತಿಂಗಳೊಳಗೆ ಅಂದರೆ ಸೆ.23ರೊಳಗೆ ಮತ್ತೊಮ್ಮೆ ಸಮಾವೇಶಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ಸದನದಲ್ಲಿನ ವ್ಯವಸ್ಥೆಗಳನ್ನು ಸ್ಪೀಕರ್ ಖುದ್ದು ಪರಿಶೀಲಿಸಿ ಅಧಿಕಾರಿಗಳೊಂದಿಗೆ ಸಮಾಲೋಚಿಸಿದರು. ಸದನದಲ್ಲಿ ರಾಜ್ಯ ಸಚಿವ ಸಂಪುಟ ಸದಸ್ಯರು, ಸದನದ ಸದಸ್ಯರು, ಹಾಜರಿರುವ ಅಧಿಕಾರಿಗಳು ಹಾಗೂ ಮಾಧ್ಯಮದವರಿಗೆ ಕರೊನಾ ಸೋಂಕು ತಗುಲದಂತೆ ಕ್ರಮ ಹಾಗೂ ಆರೋಗ್ಯ ಸಂರಕ್ಷಣೆ ಹೇಗೆ? ಎನ್ನುವುದನ್ನು ಪರಾಮರ್ಶಿಸಿದರು.